## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು, ಇವರ ನಿಯಮ 72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ

**ಗಮನ ಸೆಳೆಯುವ ಸೂಚನೆ :-**

"ಸರ್ಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು, ನಿಗಮ, ಮಂಡಳಿ ಹಾಗೂ ಆಯೋಗಗಳು ತಮ್ಮ ತಮ್ಮ ಇಲಾಖೆಗಳ ಕಾರ್ಯನಿರ್ವಹಣೆ, ಸಾಧನೆ, ಸರ್ಕಾರದ ಯೋಜನೆಗಳು, ಉದ್ದೇಶಗಳು, ಸರ್ಕಾರದಿಂದ ಇಲಾಖೆಗೆ ಬಿಡುಗಡೆಯಾಗಿರುವ ಅನುದಾನ, ಸಂಸ್ಥೆಯ ಮುಂದಿನ ಯೋಜನೆಗಳನ್ನು ಸಂಬಂಧಪಟ್ಟಂತ ಕ್ರಿಯಾ ಯೋಜನೆಯ ವಿವರಗಳನ್ನು ಇಲಾಖೆಗಳು ತಮ್ಮ ವೆಬ್‌ಸೈಟ್ (ಅಂತರ್ಜಾಲ (ನಲ್ಲಿ ಪ್ರಕಟಿಸಬೇಕಾಗಿರುವುದು ಆಯಾ ಇಲಾಖೆಗಳ ಜವಾಬ್ದಾರಿ, ಆದರೆ ಕೆಲವೊಂದು ಇಲಾಖೆಗಳನ್ನು ಹೊರತುಪಡಿಸಿದರೆ, ಬಹುತೇಕ ಜಿಲ್ಲಾಧಿಕಾರಿ ಕಛೇರಿ, ಇಲಾಖೆ, ಸ್ಥಳೀಯ ಸಂಸ್ಥೆಗಳು, ನಿಗಮ, ಮಂಡಳಿ ಹಾಗೂ ಆಯೋಗಗಳು ಪ್ರಸ್ತುತ ಮಾಹಿತಿಗಳನ್ನು ಅಪ್‌ಲೋಡ್ ಮಾಡಿರುವುದಿಲ್ಲ, ಈಗಿನ ತಂತ್ರಜ್ಞಾನದ ಯುಗದಲ್ಲಿ ಸಾರ್ವಜನಿಕರು ಎಲ್ಲಾ ಮಾಹಿತಿಗಳನ್ನು ಅಂತರ್ಜಾಲದಲ್ಲೆ ಪಡೆಯುತ್ತಿರುವ ಹಿನ್ನೆಲೆಯಲ್ಲಿ ಜವಾಬ್ದಾರಿವುಳ್ಳ ಅಧಿಕಾರಿಗಳು, ಪೂರ್ಣ ಮಾಹಿತಿಗಳನ್ನು ಸಾರ್ವಜನಿಕರ ಅನುಕೂಲಕ್ಕಾಗಿ ತಮ್ಮ ತಮ್ಮ ವೆಬ್‌ಸೈಟ್‌ಗಳಲ್ಲಿ ಪ್ರಕಟಿಸಲು ಜವಾಬ್ದಾರಿ ತೆಗೆದುಕೊಳ್ಳಬೇಕಾಗಿದೆ .ಈ ವಿಷಯವು ಸಾರ್ವಜನಿಕ ಮಹತ್ವದಾಗಿರುವುದರಿಂದ, ಇದನ್ನು ಮಾನ್ಯ ಮುಖ್ಯಮಂತ್ರಿರವರ ಗಮನಸೆಳೆಯಲು ಬಯಸುತ್ತೇನೆ ."

**ಉತ್ತರ :-**

ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖಾ ವ್ಯಾಪ್ತಿಗೊಳಪಡುವ **1)** ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ **2)** ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು **3)** ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಹಾಗೂ ಸಾಂಸ್ಕೃತಿಕ ಸಂಘ ಕಲಬುರಗಿ **4)** ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ಶಿವಮೊಗ್ಗ **5)** ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಚಿತ್ರದುರ್ಗ **6)** ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಮಂಗಳೂರು ಇವುಗಳು ತನ್ನದೇ ಆದ ವೆಬ್ ತಂತ್ರಾಂಶವನ್ನು ಹೊಂದಿರುತ್ತವೆ. ಸಭೆಯ ನಡವಳಿಗಳು, ಕಾಲ ಕಾಲಕ್ಕೆ ಹೊರಡಿಸಲಾದ ಸುತ್ತೋಲೆಗಳು ಮತ್ತು ಕ್ರಿಯಾ ಯೋಜನೆ ಮಂಜೂರಾತಿ ನೀಡಿರುವ (ವರ್ಷವಾರು, ಜಿಲ್ಲಾವಾರು ಹಾಗೂ ಕಾಮಗಾರಿವಾರು) ಮತ್ತು ಯಾವುದೇ ಬದಲಾವಣೆಗಳು ಇದ್ದಲ್ಲಿ, ಅವುಗಳ ಆದೇಶವನ್ನು ಹೊರಡಿಸಿ, ವೆಬ್ ತಂತ್ರಾಂಶದಲ್ಲಿ ಕಾಲಕಾಲಕ್ಕೆ ಇಂಧೀಕರಿಸಲಾಗುತ್ತಿದೆ.

ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರವು ಇಲಾಖಾ ಮಾಹಿತಿಯನ್ನು ವೆಬ್ ತಂತ್ರಾಂಶದಲ್ಲಿ ನಮೂದಿಸುವ ಕಾರ್ಯವು ಸಮರ್ಪಕವಾಗಿ ಕಾರ್ಯನಿರ್ವಹಣೆ ಮಾಡಲಾಗುತ್ತಿದೆ ಹಾಗೂ **8)** ಯೋಜನೆ, ಸಂಯೋಜನೆ ಮತ್ತು ಮಾಹಿತಿ ವಿಭಾಗ (ಪಿಎಂಐ) ಬೆಂಗಳೂರು ವಿಭಾಗದ ಮಾಹಿತಿಯನ್ನು ಇಂಧೀಕರಿಸುವ ಕಾರ್ಯ ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ವತಿಯಿಂದ ಕೈಗೊಳ್ಳಲಾಗುತ್ತಿದೆ ಹಾಗೂ **9)** ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗ ಬೆಂಗಳೂರು ವಿಭಾಗದ ಕಾರ್ಯನಿರ್ವಹಣೆ, ಸಾಧನೆ, ಉದ್ದೇಶಗಳು ವಿವರಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಿದ್ದು, ಇತ್ತೀಚಿಗೆ ಪುನರ್ ರಚಿತವಾಗಿರುವ ಕರ್ನಾಟಕ ರಾಜ್ಯ ಪರಿವರ್ತನಾ ಸಂಸ್ಥೆಗೆ ಸಂಬಂಧಿಸಿದ ರೂಪುರೇಷೆಗಳ ಕಾರ್ಯಗಳು ಇನ್ನೂ ಪ್ರಗತಿಯಲ್ಲಿರುವುದರಿಂದ, ಅವಶ್ಯವಿರುವ ಪರಿಣಿತರು ಹಾಗೂ ತಜ್ಞರನ್ನು ನೇಮಿಸಿಕೊಳ್ಳುವ ಹಾಗೂ ಹಲವು ರೂಪುರೇಷೆಗಳು ಅನುಷ್ಠಾನಗೊಂಡ ನಂತರ ಎಲ್ಲಾ ವಿವರಗಳನ್ನು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸಲಾಗುವುದು.

(**ಸಂಖ್ಯೆ: ಪಿಡಿಎಸ್** 60 **ಪಿಎಂಎಸ್** 2022)

(ಮುನಿರತ್ನ)
ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖಾ ಸಚಿವರು